ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ರಾಜ್ಯ ಖಾಸಗಿ ಅನುದಾನಿತ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರು ಮಾಡಬೇಕಾದ ಉಪನ್ಯಾಸಕರ ಹುದ್ದೆಗಳ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-

71 (36) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಖಾಸಗಿ ಅನುದಾನಿತ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪದವಿ ಕಾಲೇಜುಗಳ ವಿವರ ನೀಡುವುದು)

(ಆ) ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಿಗೆ ಪದವಿ ಕಾಲೇಜುಗಳಿಂದ ಹಸ್ತಾಂತರಿಸಿದ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಕಾಲೇಜುವಾರು ಮಾಹಿತಿ ನೀಡುವುದು)

(ಇ) ಪದವಿ ಕಾಲೇಜುಗಳಿಂದ ಪದವಿ ಪೂರ್ವ ಕಾಲೇಜುಗಳಿಗೆ ಹಸ್ತಾಂತರ ಮಾಡಿದ ಉಪನ್ಯಾಸಕರ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ಆಡಳಿತ ಮಂಡಳಿಯವರು ಭರ್ತಿ ಮಾಡಿಕೊಂಡಿರುತ್ತಾರೆ ; ಭರ್ತಿ ಮಾಡಿಕೊಳ್ಳದೆ ಉಳಿದ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಿಗೆ ಹುದ್ದೆಗಳನ್ನು ಹಸ್ತಾಂತರ ಮಾಡಿದ ನಂತರವೂ ಇನ್ನೂ ಮಂಜೂರು ಮಾಡಬೇಕಾದ ಹುದ್ದೆಗಳ ಸಂಖ್ಯೆ ಎಷ್ಟು ; ಈ ಕುರಿತು ಹೊಸ ಹುದ್ದೆಗಳನ್ನು ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?